**National**
**Kannada**
**11.02.2025 13.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ವಿಶ್ವದಲ್ಲೇ ೫ನೇ ಅತಿ ದೊಡ್ಡ ಆರ್ಥಿಕ ರಾಷ್ಟ್ರವಾಗಿ ಭಾರತ, ಸೌರ ವಿದ್ಯುತ್ ಉತ್ಪಾದನಾ ವಲಯದಲ್ಲಿಯೂ ಮುಂಚೂಣಿ - ಪ್ರಧಾನಿ ನರೇಂದ್ರ ಮೋದಿ

2. ೩೦ನೇ ದಿನವೂ ಮುಂದುವರೆದ ಪ್ರಯಾಗ್‌ರಾಜ್‌ನ ಮಹಾಕುಂಭ ಮೇಳ, ನಾಳಿನ ಮಾಘ ಪೂರ್ಣಿಮಾ ಸ್ನಾನಕ್ಕೆ ಸಕಲ ಸಿದ್ಧತೆ

3. ಪ್ರಧಾನಮಂತ್ರಿ ಗ್ರಾಮ್ ಸಡಕ್ ಯೋಜನೆಯಡಿ ಕೇಂದ್ರ ಸರ್ಕಾರದಿಂದ ಇದುವರೆಗೆ ೭ ಲಕ್ಷಕ್ಕೂ ಅಧಿಕ ಕಿಲೋಮೀಟರ್ ರಸ್ತೆಗಳ ನಿರ್ಮಾಣ

4. ಇಂದು ಪಂಡಿತ್ ದೀನ್‌ದಯಾಳ್ ಉಪಾಧ್ಯಾಯ ಅವರ ಪುಣ್ಯ ತಿಥಿ; ಗೃಹ ಸಚಿವ ಅಮಿತ್ ಶಾ ಸೇರಿದಂತೆ ಹಲವು ಗಣ್ಯರಿಂದ ಗೌರವ ನಮನ

<><><><>

ಕಳೆದ ಒಂದು ದಶಕದ ಅವಧಿಯಲ್ಲಿ ೧೦ನೇ ಸ್ಥಾನದಲಿದ್ದ ಭಾರತ, ೫ನೇ ಅತಿ ದೊಡ್ಡ ಆರ್ಥಿಕ ರಾಷ್ಟ್ರವಾಗಿ ಹೊರ ಹೊಮ್ಮಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯ ಯಶೋಭೂಮಿಯಲ್ಲಿ ಏರ್ಪಡಿಸಿರುವ ಭಾರತ ಇಂಧನ ಸಪ್ತಾಹ ೨೦೨೫ ಅನ್ನು ವರ್ಚುಯಲ್ ಮೂಲಕ ಇಂದು ಬೆಳಗ್ಗೆ ಉದ್ಘಾಟಿಸಿದ ಪ್ರಧಾನಿ ನರೇಂದ್ರ ಮೋದಿ ಈ ವಿಷಯ ತಿಳಿಸಿದ್ದಾರೆ. ದೇಶದ ಸೌರಶಕ್ತಿ ಉತ್ಪಾದನಾ ಸಾಮರ್ಥ್ಯ ೩೨ ಪಟ್ಟು ಹೆಚ್ಚಾಗಿದ್ದು, ಸೌರ ವಿದ್ಯುತ್ ಉತ್ಪಾದನಾ ರಾಷ್ಟ್ರಗಳ ಪೈಕಿ ಭಾರತ ಮೂರನೇ ಅತಿ ದೊಡ್ಡ ರಾಷ್ಟ್ರವಾಗಿ ರೂಪುಗೊಂಡಿದೆ ಎಂದು ಪ್ರಧಾನಿ ಹೇಳಿದ್ದಾರೆ. ಪಳೆಯುಳಿಕೆರಹಿತ ಇಂಧನ ಉತ್ಪಾದನಾ ಸಾಮರ್ಥ್ಯ ಮೂರು ಪಟ್ಟು ಹೆಚ್ಚಾಗಿದೆ. ಪ್ಯಾರಿಸ್ ಜಿ-೨೦ರ ಒಪ್ಪಂದಗಳಲ್ಲಿ ಒಳಗೊಂಡಿರುವ ಗುರಿಗಳನ್ನು ಸಾಧಿಸುವಲ್ಲಿ ಭಾರತ ಮೊದಲ ರಾಷ್ಟ್ರವಾಗಿದೆ ಎಂದು ಅವರು ಹೇಳಿದ್ದಾರೆ.

ಧ್ವನಿ: ಪ್ರಧಾನಿ ನರೇಂದ್ರ ಮೋದಿ ೩೩ ಸೆಕೆಂಡ್

ಭಾರತ ತನ್ನ ಪ್ರಗತಿಯನ್ನು ಸಾಧಿಸುವುದರ ಜೊತೆಗೆ ವಿಶ್ವದ ಬೆಳವಣಿಗೆಗೂ ಕಾರಣವಾಗಿದೆ. ದೇಶದ ಇಂಧನ ವಲಯ ಈ ಎತ್ತರಕ್ಕೆ ಬೆಳೆಯಲು ತನ್ನದೇ ಆದ ಪಾತ್ರವಹಿಸಿದೆ. ಭಾರತದ ಜೈವಿಕ ಇಂಧನ ಉದ್ಯಮ ತ್ವರಿತಗತಿಯಲ್ಲಿ ಪ್ರಗತಿ ಸಾಧಿಸಲು ಸರ್ವಸನ್ನದ್ಧವಾಗಿದೆ. ಭಾರತ ೫೦೦ ದಶಲಕ್ಷ ಮೆಟ್ರಿಕ್ ಟನ್‌ಗಳಷ್ಟು ಸುಸ್ಥಿರ ಪೂರಕ ವಸ್ತುಗಳನ್ನು ಹೊಂದಿದೆ ಎಂದು ಪ್ರಧಾನಿ ತಿಳಿಸಿದ್ದಾರೆ.

ಧ್ವನಿ: ಪ್ರಧಾನಿ ನರೇಂದ್ರ ಮೋದಿ ೨೧ ಸೆಕೆಂಡ್

ಎಥನಾಲ್ ಮಿಶ್ರಣ ಕುರಿತು ಪ್ರಸ್ತಾಪಿಸಿದ ಪ್ರಧಾನಿ ನರೇಂದ್ರ ಮೋದಿ, ಪ್ರಸ್ತುತ ಭಾರತದಲ್ಲಿ ಶೇಕಡ ೧೯ ರಷ್ಟು ಎಥನಾಲ್ ಮಿಶ್ರಣ ನಡೆಯುತ್ತಿದೆ. ಇದರಿಂದಾಗಿ ವಿದೇಶಿ ವಿನಿಮಯ ಉಳಿತಾಯವಾಗಲು ಸಹಕಾರಿಯಾಗಿದೆ. ರೈತರ ಸುಸ್ಥಿರ ಆದಾಯ ಹೆಚ್ಚಳಕ್ಕೂ ನೆರವಾಗಿದೆ. ಈ ವರ್ಷದ ಅಕ್ಟೋಬರ್ ವೇಳೆಗೆ ಶೇಕಡ ೨೦ ರಷ್ಟು ಎಥನಾಲ್ ಮಿಶ್ರಣ ಮಾಡಬೇಕೆಂಬ ಗುರಿಯನ್ನು ಸಾಧಿಸುವ ನಿಟ್ಟಿನಲ್ಲಿ ಭಾರತ ಮುನ್ನಡೆದಿದೆ ಎಂದು ತಿಳಿಸಿದ್ದಾರೆ.

<><><><>

ಕೃತಕ ಬುದ್ಧಿಮತ್ತೆ ಮತ್ತು ಶುದ್ಧ ಅಡುಗೆ ಮಾಡುವುದು ಪ್ರಮುಖ ಇಂಧನ ಬೇಡಿಕೆಗಳಾಗಿದ್ದು, ಆರ್ಥಿಕತೆ ಹಾಗೂ ಸಮಾಜಗಳ ಭವಿಷ್ಯವನ್ನು ರೂಪಿಸುವಂತಹ ಮಹತ್ವದ ವಲಯಗಳಾಗಿವೆ ಎಂದು ಕೇಂದ್ರ ಪೆಟ್ರೋಲಿಯಂ ಹಾಗೂ ನೈಸರ್ಗಿಕ ಅನಿಲ ಖಾತೆ ಸಚಿವ ಹರ್ದೀಪ್ ಸಿಂಗ್ ಪುರಿ ಹೇಳಿದ್ದಾರೆ. ಭಾರತ ಇಂಧನ ಸಪ್ತಾಹದ ಉದ್ಘಾಟನಾ ಸಮಾರಂಭದಲ್ಲಿ ಪ್ರಸ್ತಾವಿಕವಾಗಿ ಮಾತನಾಡಿದ ಸಚಿವರು, ಕೃತಕ ಬುದ್ಧಿಮತ್ತೆ ಅತಿ ದೊಡ್ಡ ಇಂಧನ ಗ್ರಾಹಕರನ್ನು ಹೊಂದಿರುವ ಕ್ಷೇತ್ರವಾಗಿದ್ದು, ೨೦೩೦ರ ವೇಳೆಗೆ ಡಾಟಾ ಸೆಂಟರ್ ಬೇಡಿಕೆಯೊಂದಿಗೆ ವಾರ್ಷಿಕವಾಗಿ ಶೇಕಡ ೧೮ ರಿಂದ ೨೦ ರಷ್ಟು ಹೆಚ್ಚಾಗಲಿದೆ ಎಂದು ತಿಳಿಸಿದ್ದಾರೆ. ಪ್ರಧಾನಮಂತ್ರಿ ಉಜ್ವಲ ಯೋಜನಾ ಮೂಲಕ ದೇಶದಲ್ಲಿ ಶುದ್ಧ ಅಡುಗೆ ಮಾಡುವ ವಿಧಾನವನ್ನು ಅಳವಡಿಸಿಕೊಳ್ಳುವಲ್ಲಿ ೧೦೦ ರಷ್ಟು ಸಾಧನೆ ಮಾಡಲಾಗಿದೆ ಎಂದು ಸಚಿವರು ಹೇಳಿದ್ದಾರೆ.

<><><><>

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳ ೩೦ನೇ ದಿನಕ್ಕೆ ಕಾಲಿಟ್ಟಿದೆ. ಪವಿತ್ರ ತ್ರಿವೇಣಿ ಸಂಗಮದಲ್ಲಿ ಸಹಸ್ರಾರು ಭಕ್ತರು, ಆಧ್ಯಾತ್ಮಿಕ ಶುದ್ಧೀಕರಣ ಮತ್ತು ಭಗವಂತನ ಆಶೀರ್ವಾದ ಪಡೆಯುವ ಸಲುವಾಗಿ ಪುಣ್ಯಸ್ನಾನ ಮಾಡುವುದನ್ನು ಮುಂದುವರೆಸಿದ್ದಾರೆ. ಭಕ್ತರ ದಟ್ಟಣೆಯ ನಡುವೆಯೂ ಯಾತ್ರಿಕರು ಪೂಜಾ ಕಾರ್ಯಗಳು, ಪ್ರಾರ್ಥನೆ ಹಾಗೂ ವಿವಿಧ ಧಾರ್ಮಿಕ ವಿಧಿ-ವಿಧಾನಗಳನ್ನು ನೆರವೇರಿಸುವಲ್ಲಿ ಮಗ್ನರಾಗಿದ್ದಾರೆ. ಬೃಹತ್ ಧಾರ್ಮಿಕ ಕಾರ್ಯಕ್ರಮ ಸುಸೂತ್ರವಾಗಿ ನಡೆಯಲು ಉತ್ತರ ಪ್ರದೇಶ ಮಾಡಿರುವ ವ್ಯವಸ್ಥೆಗಳ ಬಗ್ಗೆ ಭಕ್ತರು ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ. ಕುಂಭಮೇಳ ನಡೆಯುವ ಪ್ರದೇಶದಲ್ಲಿ ಪ್ರಾರ್ಥನೆ ಹಾಗೂ ಇನ್ನಿತರ ಧಾರ್ಮಿಕ ಕಾರ್ಯಗಳು ಸುಸೂತ್ರವಾಗಿ ನಡೆಯಲು ಅನುಕೂಲವಾಗುವಂತೆ ಭದ್ರತಾ ಸಿಬ್ಬಂದಿ, ಸ್ವಯಂ ಸೇವಕರು ಹಾಗೂ ವೈದ್ಯಕೀಯ ತಂಡಗಳ ಪ್ರತಿನಿಧಿಗಳು ಹಗಲಿರುಳು ಶ್ರಮಿಸುತ್ತಿದ್ದಾರೆ. ನಾಳೆ ನಡೆಯಲಿರುವ ಮಾಘಿ ಪೂರ್ಣಿಮಾ ಸ್ನಾನಕ್ಕಾಗಿ ವ್ಯಾಪಕ ಪೂರ್ವ

ಸಿದ್ಧತೆಗಳು ನಡೆಯುತ್ತಿದ್ದು, ಪ್ರಯಾಗ್‌ರಾಜ್ ಆಡಳಿತ ಈ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಂಡಿದೆ. ಭಕ್ತರ ಸುರಕ್ಷತೆಗಾಗಿ ಅಗತ್ಯ ಮುನ್ನೆಚ್ಚರಿಕೆಗಳನ್ನು ಕೈಗೊಳ್ಳಲಾಗಿದೆ.

ಈ ನಡುವೆ, ಭಾರತೀಯ ರೈಲ್ವೆ, ನಾಳಿನ ಮಾಘ ಪೂರ್ಣಿಮಾ ಸ್ನಾನದ ಅಂಗವಾಗಿ ಪ್ರಯಾಗ್ ರಾಜ್‌ನ ಕುಂಭ ಮೇಳಕ್ಕೆ ಬರಲಿರುವ ಯಾತ್ರಾರ್ಥಿಗಳು ಹಾಗೂ ಪ್ರವಾಸಿಗರ ಅನುಕೂಲಕ್ಕಾಗಿ ವಿಶೇಷ ಸೌಲಭ್ಯ ಕಲ್ಪಿಸಲು ಸಮರೋಪಾದಿ ವ್ಯವಸ್ಥೆ ಮಾಡಲು ಮುಂದಾಗಿದೆ. ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ನಿನ್ನೆ ಪ್ರಯಾಗ್ ರಾಜ್ ರೈಲ್ವೆ ನಿಲ್ದಾಣಕ್ಕೆ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಗಳನ್ನು ಪರಿಶೀಲಿಸಿದರು. ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅಶ್ವಿನಿ ವೈಷ್ಣವ್, ಮಹಾಕುಂಭ ಮೇಳಕ್ಕಾಗಿ ನಗರದಲ್ಲಿನ ೮ ರೈಲ್ವೆ ನಿಲ್ದಾಣಗಳಲ್ಲಿ ವ್ಯಾಪಕ ಸಿದ್ಧತೆಗಳನ್ನು ಮಾಡಲಾಗಿದೆ ಎಂದು ತಿಳಿಸಿದರು.

<><><><>

ಪ್ರಧಾನಮಂತ್ರಿ ಗ್ರಾಮ್ ಸಡಕ್ ಯೋಜನೆ ೨೦೦೨ರಲ್ಲಿ ಜಾರಿಗೆ ಬಂದಿದ್ದು, ಅಲ್ಲಿಂದೀಚೆಗೆ ೭ ಲಕ್ಷ ೭೨ ಸಾವಿರ ಕಿಲೋಮೀಟರ್ ರಸ್ತೆಗಳನ್ನು ನಿರ್ಮಿಸಲಾಗಿದೆ ಎಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಖಾತೆ ರಾಜ್ಯ ಸಚಿವ ಕಮಲೇಶ್ ಪಾಸ್ವಾನ್ ಹೇಳಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯರ ಪೂರಕ ಪ್ರಶ್ನೆಗಳಿಗೆ ಉತ್ತರಿಸಿದ ಸಚಿವರು, ಈ ಯೋಜನೆ ಜಾರಿಯಿಂದಾಗಿ ಗ್ರಾಮೀಣ ಭಾಗದಲ್ಲಿನ ೧ ಲಕ್ಷ ೬೩ ಸಾವಿರದ ವಸತಿ ಪ್ರದೇಶಗಳಿಗೆ ರಸ್ತೆ ಸಂಪರ್ಕ ಕಲ್ಪಿಸಲಾಗಿದೆ ಎಂದು ಮಾಹಿತಿ ನೀಡಿದರು. ಈ ಯೋಜನೆಯ ೪ನೇ ಹಂತದಲ್ಲಿ ದೇಶದ ೨೫ ಸಾವಿರಕ್ಕೂ ಹೆಚ್ಚು ವಸತಿ ಪ್ರದೇಶಗಳಿಗೆ ರಸ್ತೆ ಸಂಪರ್ಕ ಗುರಿ ಹೊಂದಲಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿನ ಹಲವು ವಸತಿ ಪ್ರದೇಶಗಳಿಗೆ ಇನ್ನೂ ರಸ್ತೆ ಸಂಪರ್ಕ ಇಲ್ಲದ ಕಾರಣ ಯೋಜನೆಯ ೪ನೇ ಹಂತವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸರ್ಕಾರ ಉದ್ದೇಶಿಸಿದೆ ಎಂದರು.

<><><><>

ಪಂಡಿತ್ ದೀನ್‌ದಯಾಳ್ ಉಪಾಧ್ಯಾಯ ಅವರ ಪುಣ್ಯ ತಿಥಿ ಅಂಗವಾಗಿ ಇಂದು ದೇಶಾದ್ಯಂತ ಗೌರವ ನಮನ ಸಲ್ಲಿಸಲಾಗುತ್ತಿದೆ. ದೀನ್ ದಯಾಳ್ ಉಪಾಧ್ಯಾಯ್ ಅವರಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಶ್ರದ್ಧಾಂಜಲಿ ಸಲ್ಲಿಸಿದ್ದು, ಮಹಾನ್ ನಾಯಕರು ತಮ್ಮ ಉಸಿರಿರುವ ತನಕ ತಾಯಿ ಭಾರತಾಂಬೆಯ ಘನತೆಯನ್ನು ಹೆಚ್ಚಿಸಲು ಶ್ರಮಿಸಿದ್ದರು ಎಂದು ಸ್ಮರಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಅಮಿತ್ ಶಾ, ಭಾರತೀಯ ರಾಜಕಾರಣದಲ್ಲಿ ಅಂತ್ಯೋದಯ ತತ್ವಗಳನ್ನು ಪ್ರತಿಷ್ಠಾಪಿಸಲು ಅಪಾರವಾಗಿ ಶ್ರಮಿಸಿದ್ದರು. ಅವರ ಚಿಂತನೆ ಹಾಗೂ ತತ್ವಗಳು ದೇಶದ ಜನರ ಸೇವೆಯನ್ನು ಮಾಡಲು ಪ್ರತಿಯೊಬ್ಬರಿಗೂ ಸದಾ ಸ್ಫೂರ್ತಿಯಾಗಿವೆ ಎಂದು ಹೇಳಿದ್ದಾರೆ. ದೆಹಲಿಯ ಬಿಜೆಪಿ ಕೇಂದ್ರ ಕಚೇರಿಯಲ್ಲಿಂದು ನಡೆದ ಸಭೆಯಲ್ಲಿ ಪಾಲ್ಗೊಂಡಿದ್ದ

ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಹಾಗೂ ಇತರ ನಾಯಕರು ಪಂಡಿತ್ ದೀನ್ ದಯಾಲ್ ಉಪಾಧ್ಯಾಯ ಅವರಿಗೆ ಗೌರವ ನಮನ ಸಲ್ಲಿಸಿದರು. ಪಂಡಿತ್ ದೀನ್ ದಯಾಲ್ ಉಪಾಧ್ಯಾಯ ಅವರು, ೧೯೫೩ ರಿಂದ ೧೯೬೮ರವರೆಗೆ ಭಾರತೀಯ ಜನ ಸಂಘದ ನಾಯಕರಾಗಿ ಸೇವೆ ಸಲ್ಲಿಸಿದ್ದರು. ಬಿಜೆಪಿ ಪಕ್ಷ ಜನ್ಮ ತಾಳುವವರೆಗೂ ಅದಕ್ಕೆ ಮಾರ್ಗದರ್ಶಕರು ಹಾಗೂ ನೈತಿಕ ಬೆಂಬಲವಾಗಿ ನಿಂತಿದ್ದರು.

<><><><>

ಬೆಂಗಳೂರಿನ ಆರ್ಟ್ ಆಫ್ ಲಿವಿಂಗ್ ಅಂತಾರಾಷ್ಟ್ರೀಯ ಕೇಂದ್ರದಲ್ಲಿ  ಇದೇ ೧೪ ರಿಂದ ೧೬ ರವರೆಗೆ ನಡೆಯಲಿರುವ ೧೦ನೇ ಅಂತಾರಾಷ್ಟ್ರೀಯ ಮಹಿಳಾ ಸಮ್ಮೇಳನದಲ್ಲಿ ರಾಷ್ಟಪತಿ ದ್ರೌಪದಿ ಮುರ್ಮು ಭಾಗವಹಿಸಲಿದ್ದಾರೆ. ರಾಷ್ಟಪತಿ ಅವರ ಜೊತೆಗೆ ರಾಜಕೀಯ, ಉದ್ಯಮ, ಕಲೆ ಮತ್ತು ಸಾಮಾಜಿಕ ವಲಯ ಸೇರಿದಂತೆ ವಿವಿಧ ಕ್ಷೇತ್ರಗಳ ಪ್ರಮುಖರು ಈ  ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಆರ್ಟ್ ಆಫ್ ಲಿವಿಂಗ್ ಆಯೋಜಿಸಿರುವ ಈ ಕಾರ್ಯಕ್ರಮದಲ್ಲಿ ೬೦ಕ್ಕೂ ಹೆಚ್ಚು ಭಾಷಣಕಾರರು ಮತ್ತು ೫೦೦ಕ್ಕೂ ಹೆಚ್ಚು ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ. ಈ ಸಮ್ಮೇಳನದಲ್ಲಿ ಕರ್ನಾಟಕ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಕೇಂದ್ರ ಸಚಿವೆ ಅನ್ನಪೂರ್ಣ ದೇವಿ, ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ಮಾಜಿ ರಾಜ್ಯ ಸಚಿವೆ ಮೀನಾಕ್ಷಿ ಲೇಖಿ, ಕಾಮನ್‌ವೆಲ್ತ್ ಪ್ರಧಾನ ಕಾರ್ಯದರ್ಶಿ ಪೆಟ್ರೀಷಿಯಾ ಸ್ಕಾಟ್ಲೆಂಡ್ ಮತ್ತು ಜಪಾನ್‌ನ ಮಾಜಿ ಪ್ರಧಾನಿ ಶಿಂಜೊ ಅಬೆ ಅವರ ಪತ್ನಿ ಅಕಿ ಅಬೆ ಅವರು ಭಾಗವಹಿಸಲಿದ್ದಾರೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. ಬಾಲಿವುಡ್ ನಟಿಯರಾದ ಹೇಮಾ ಮಾಲಿನಿ ಮತ್ತು ಶರ್ಮಿಳಾ ಟ್ಯಾಗೋರ್, ಸಾರಾ ಅಲಿ ಖಾನ್ ಮತ್ತು ಸೋನಾಕ್ಷಿ ಸಿನ್ಹಾ ಕೂಡ ಭಾಗವಹಿಸಲಿದ್ದಾರೆ.

<><><><>

ಬೆಂಗಳೂರು ಅರಮನೆ ಮೈದಾನದಲ್ಲಿ ಇಂದಿನಿಂದ ಇದೇ ೧೪ರವರೆಗೆ ಇನ್ವೆಸ್ಟ್ ಕರ್ನಾಟಕ ೨೦೨೫ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ ನಡೆಯಲಿದ್ದು, ಇಂದು ಸಂಜೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸಮಾವೇಶಕ್ಕೆ ಚಾಲನೆ ನೀಡಲಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ, ಎಚ್.ಡಿ.ಕುಮಾರಸ್ವಾಮಿ, ಶೋಭಾ ಕರಂದ್ಲಾಜೆ ಹಾಗೂ ವಿ.ಸೋಮಣ್ಣ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>